**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ.ರವರ ನ್ಯಾಯಾಲಯದಲ್ಲಿ, ತರೀಕೆರೆ.**

**ಸಿ.ಸಿ.899/2022**

ಪಿರ್ಯಾದುದಾರರು ಃ ತರೀಕೆರೆ ಪೊಲೀಸ್

-ವಿರುದ್ಧ-

ಆರೋಪಿ/ತರು ಃ ಕೃಷ್ಣ

-ಃದೋಷಾರೋಪಣೆಃ-

ಶ್ರೀ ವೈದ್ಯ ಶ್ರೀಕಾಂತ್, ಬಿ.ಎಸ್ಸಿ, ಎಲ್.ಎಲ್.ಬಿ., ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರಥಮ ದರ್ಜೆ ನ್ಯಾಯಿಕ ದಂಡಾಧಿಕಾರಿಗಳು, ತರೀಕೆರೆ ಆದ ನಾನು ಈ ಕೆಳಗೆ ಕಾಣಿಸಿರುವಃ

ಕೃಷ್ಣ ಬಿನ್ ಶಿವಲಿಂಗಣ್ಣ , 40 ವರ್ಷ, ವ್ಯಾಪಾರ,
ವಾಸಃನಾಗೇನಹಳ್ಳಿ, ತರೀಕೆರೆ ತಾಃ

ಆದ ನಿಮ್ಮ ವಿರುದ್ಧ ಈ ಕೆಳಗಿನಂತೆ ಹೊರಿಸಿರುವ ದೋಷಾರೋಪಣೆ ಎಂದರೆಃ

ದಿನಾಂಕಃ01.11.2021 ರಂದು ಸಂಜೆ 6-30ರ ಸಮಯದಲ್ಲಿ ತರೀಕೆರೆ ಪೊಲೀಸ್ ಠಾಣಾ ಸರಹದ್ದಿನ ನಾಗೇನಹಳ್ಳಿ ಗ್ರಾಮದ ಆರೋಪಿಯಾದ ನೀವು ಅಂಗಡಿಯ ಮುಂಭಾಗ ಅಕ್ರಮವಾಗಿ ಯಾವುದೇ ಪರವಾನಗಿ ಇಲ್ಲದೇ ಖಾಕಿ ಬಾಕ್ಸ್ ನಲ್ಲಿ ರೂ.3,372.48/- ಬೆಲೆ ಬಾಳುವ ಮದ್ಯ ತುಂಬಿದ 90 ಎಂ ಎಲ್ ನ 96 ORIGINAL CHOICE DELUXE WHISKEY ಟೆಟ್ರಾ ಪ್ಯಾಕ್‌ಗಳನ್ನು ಹೊಂದಿ, ಆ ಮೂಲಕ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.32 ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

2. ಅದೇ ದಿನ, ಅದೇ ಸಮಯ, ಸ್ಥಳ ಹಾಗೂ ವಿಚಾರದಲ್ಲಿ ಆರೋಪಿಯಾದ ನೀವು ಒಂದು ಖಾಕಿ ಬಾಕ್ಸ್ ನಲ್ಲಿ ರೂ.3,372.48/- ಬೆಲೆ ಬಾಳುವ ಮದ್ಯ ತುಂಬಿದ 90 ಎಂ ಎಲ್ ನ 96 ORIGINAL CHOICE DELUXE WHISKEY ಟೆಟ್ರಾ ಪ್ಯಾಕ್‌ಗಳನ್ನು ಅಕ್ರಮವಾಗಿ ಇಟ್ಟುಕೊಂಡು ಲಾಭಕ್ಕಾಗಿ ಮಾರಾಟ ಮಾಡುತ್ತಿದ್ದು, ಆ

ಮೂಲಕ ನೀವು ಕರ್ನಾಟಕ ಅಬಕಾರಿ ಕಾಯ್ದೆ ಕಲಂ.**34** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

3. ಮೇಲೆ ಹೇಳಿದ ದಿನಾಂಕ, ಸಮಯ, ಸ್ಥಳ ಹಾಗೂ ಸಂದರ್ಭಗಳಂದು ನೀವು ಆರೋಪಿಯಾದ ಒಂದು ಖಾಕಿ ಬಾಕ್ಸ್ ನಲ್ಲಿ ರೂ.3,372.48/- ಬೆಲೆ ಬಾಳುವ ಮದ್ಯ ತುಂಬಿದ 90 ಎಂ ಎಲ್ ನ 96 ORIGINAL CHOICE DELUXE WHISKEY ಟೆಟ್ರಾ ಪ್ಯಾಕ್‌ಗಳು ಅದು ಮಾನವನ ಆರೋಗ್ಯಕ್ಕೆ ಹಾನಿಕರವೆಂದು ಗೊತ್ತಿದ್ದರೂ ಕೂಡಾ ವಶದಲ್ಲಿಟ್ಟುಕೊಂಡು ಲಾಭಕ್ಕಾಗಿ ಸಾರ್ವಜನಿಕರಿಗೆ ಮಾರಾಟ ಮಾಡುತ್ತಿದ್ದು, ಆ ಮೂಲಕ ನೀವು ಭಾ.ದಂ.ಸಂ. ಕಲಂ.**273** ರ ರೀತ್ಯಾ ಅಪರಾಧಗಳನ್ನು ಈ ನ್ಯಾಯಾಲಯದ ಸಂಜ್ಞಾನದಲ್ಲಿ ಮಾಡಿರುತ್ತೀರಿ.

ಈ ಆರೋಪಗಳ ಮೇಲೆ ನೀವು ಈ ನ್ಯಾಯಾಲಯದ ಆರೋಪ ವಿಚಾರಣೆಗೆ ಗುರಿಯಾಗತಕ್ಕದ್ದೆಂದು ನಾನು ಈ ಮೂಲಕ ನಿರ್ದೇಶಿಸುತ್ತೇನೆ.

ದಿನಾಂಕಃ 20.06.2023

Sd/-
**(ವೈದ್ಯ ಶ್ರೀಕಾಂತ್)**
ಹಿ. ಪ್ರಧಾನ ಪ್ರದನ್ಯಾದಂ, ತರೀಕೆರೆ.

ಪ್ರಃ 1) ನಿಮಗೆ ತಿಳಿಯುವಂತಹ ಭಾಷೆಯಲ್ಲಿ ಓದಿ ಹೇಳಲಾದ ಆರೋಪಣೆಯನ್ನು ನೀವು ಕೇಳಿ ತಿಳಿದುಕೊಂಡಿರುವಿರಾ?
ಉಃ ಹೌದು

ಪ್ರಃ 2) ಸದರಿ ಆರೋಪಣೆಗಳನ್ನು ನೀವು ಒಪ್ಪಿಕೊಳ್ಳುತ್ತೀರಾ ಅಥವಾ ನಿರಾಕರಿಸುತ್ತೀರಾ?
ಉಃ ವಿಚಾರಣೆ ಆಗಬೇಕು

(ಆರೋಪವನ್ನು ಆರೋಪಿತರಿಗೆ ಓದಿ ಹೇಳಿ ಅವರು ಕೊಟ್ಟ ಉತ್ತರವನ್ನು ನಾನೇ ಸ್ವತಃ ಬರೆದುಕೊಂಡಿರುವುದು ನಿಜ ಮತ್ತು ಸತ್ಯವಾಗಿದೆ ಎಂದು ಈ ಮೂಲಕ ದೃಢೀಕರಿಸುತ್ತೇನೆ)
ದಿನಾಂಕಃ

*Sd/-*
ಹಿ. ಪ್ರಧಾನ ಪ್ರ.ದ.ನ್ಯಾದಂ ತರೀಕೆರೆ.

ಆರೋಪಿ/ತರ ಸಹಿಃ